**Akashvani : Bangalore**
**National Bulletin In Kannada**
**21.08.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.08.2024 / 7.35 am**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದಿನಿಂದ ಪೋಲೆಂಡ್ ಹಾಗೂ ಉಕ್ರೇನ್ ದೇಶಗಳಿಗೆ ಮೂರು ದಿನಗಳ ಅಧಿಕೃತ ಭೇಟಿ

೨. ಭಾರತ-ಜಪಾನ್ ದ್ವಿಪಕ್ಷೀಯ ಸಂವಾದ; ಸಹಕಾರ ಬಲವರ್ಧನೆಗೆ ಹೊಸ ಉಪಕ್ರಮಗಳ ಕುರಿತು ಚರ್ಚೆ

೩. ಇಂಧನ ಕ್ಷೇತ್ರದ ದಕ್ಷತೆ ಮತ್ತು ಪಾರದರ್ಶಕತೆ ಹೆಚ್ಚಿಸಲು ಮೂರು ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳಿಗೆ ಕೇಂದ್ರ ಸಚಿವ ಮನೋಹರ್ ಲಾಲ್ ಖಟ್ಟರ್ ಚಾಲನೆ

೪. ೧೭ ವರ್ಷದೊಳಗಿನ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್; ೧೧೦ ಕೆ.ಜಿ ವಿಭಾಗದಲ್ಲಿ ಕಂಚಿನ ಪದಕ ಗೆದ್ದ ಭಾರತದ ರೋನಕ್ ದಹಿಯಾ

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪೋಲೆಂಡ್ ಹಾಗೂ ಉಕ್ರೇನ್ ದೇಶಗಳಿಗೆ ಇಂದಿನಿಂದ ಮೂರು ದಿನಗಳ ಕಾಲ ಅಧಿಕೃತ ಭೇಟಿ ನೀಡಲಿದ್ದಾರೆ.  ಈ ಕುರಿತು ಮಾಹಿತಿ ನೀಡಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ತನ್ಮಯ್ ಲಾಲ್, ಭಾರತದ ಪ್ರಧಾನಿಯೊಬ್ಬರು ೪೫ ವರ್ಷಗಳ ಬಳಿಕ ಪೋಲೆಂಡ್‌ಗೆ ನೀಡುತ್ತಿರುವ ಭೇಟಿ ಇದಾಗಿದೆ. ಪ್ರಧಾನಿ ಅವರಿಗೆ ವಾರ್ಸಾದಲ್ಲಿ ಸಾಂಪ್ರದಾಯಿಕ ಸ್ವಾಗತ ನೀಡಲಾಗುತ್ತಿದೆ. ಮೋದಿ ಅವರು ಪೋಲೆಂಡಿನ ಪ್ರಧಾನಿ ಡೋನಾಲ್ಡ್ ಟೆಸ್ಕ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ ಎಂದು ತಿಳಿಸಿದರು. ಪೋಲೆಂಡ್‌ನ ಆಂಡ್ರೆ ಝುಜ್ ದುಡಾ ಅವರನ್ನು ಭೇಟಿ ಮಾಡಲಿದ್ದಾರೆ. ಅಲ್ಲದೇ, ವಾರ್ಸಾದಲ್ಲಿ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸುವರು. ಉಕ್ರೇನಿನ ಅಧ್ಯಕ್ಷ ವೊಲೊಡಿಮಿರ್ ಝುಲೆನ್ಸ್ಕಿ ಅವರ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ಇದೇ ೨೩ರಂದು ಉಕ್ರೇನಿಗೆ ಭೇಟಿ ನೀಡಲಿದ್ದಾರೆ ಎಂದು ತನ್ಮೆ ಲಾಲ್ ತಿಳಿಸಿದರು. ತಮ್ಮ ಉಕ್ರೇನ್ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಝುಲೆನ್ಸ್ಕಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ನಂತರ ನಿಯೋಗ ಮಟ್ಟದ ಮಾತುಕತೆಯೂ ನಡೆಯಲಿದೆ. ತಮ್ಮ ಭೇಟಿಯ ಸಂದರ್ಭದಲ್ಲಿ ಅನೇಕ  ವಿಷಯಗಳ ಕುರಿತು ಅವರು ಚರ್ಚೆ ನಡೆಸುವ ನಿರೀಕ್ಷೆ ಇದೆ.

**<><*<><>*><>**

ನವದೆಹಲಿಯಲ್ಲಿ ನಿನ್ನೆ ನಡೆದ ದ್ವಿಪಕ್ಷೀಯ ಸಚಿವರ ಸಂವಾದದಲ್ಲಿ ಭಾರತ ಮತ್ತು ಜಪಾನ್ ದೇಶಗಳು ದ್ವಿಪಕ್ಷೀಯ ಸಹಕಾರವನ್ನು ಪರಿಶೀಲಿಸಲಾಯಿತು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ವಿದೇಶಾಂಗ ಸಚಿವ ಡಾ.ಎಸ್ ಜೈಶಂಕರ್, ಜಪಾನ್ ರಕ್ಷಣಾ ಸಚಿವ ಕಿಹರಾ ಮಿನೋರು ಮತ್ತು ವಿದೇಶಾಂಗ ವ್ಯವಹಾರಗಳ ಸಚಿವ ಎಂ.ಎಸ್.ಯೊಕೊ ಕಾಮಿಕಾವಾ ಸಭೆಯಲ್ಲಿ ಭಾಗವಹಿಸಿದ್ದರು. ಸಭೆಯಲ್ಲಿ, ಸಚಿವರುಗಳು ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಹಕಾರ ಬಲವರ್ಧನೆಗೆ ಹೊಸ ಉಪಕ್ರಮಗಳ ಕುರಿತು ಚರ್ಚಿಸಿದರು. ಈ ವೇಳೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಸಭೆಯ ನಂತರ ಪತ್ರಿಕಾ ಹೇಳಿಕೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಸೆಪ್ಟೆಂಬರ್ ೨೦೨೨ ರಲ್ಲಿ ಟೋಕಿಯೊದಲ್ಲಿ ನಡೆದ ಕೊನೆಯ ಸಭೆಯ ನಂತರ ಉಭಯ ದೇಶಗಳ ರಕ್ಷಣಾ ಸಚಿವಾಲಯಗಳ ನಡುವಿನ ಅತ್ಯುತ್ತಮ ಸಮನ್ವಯದಿಂದಾಗಿ ಗಣನೀಯ ಪ್ರಗತಿಯನ್ನು ಸಾಧಿಸಿವೆ. ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ ಸ್ಥಾಪಿಸಲು ಇಂಡೋ-ಜಪಾನ್ ಪಾಲುದಾರಿಕೆ ಮುಖ್ಯವಾಗಿದೆ ಎಂದರು. ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ರಕ್ಷಣಾ ಮತ್ತು ಭದ್ರತೆ ಕುರಿತು ಸಭೆಯಲ್ಲಿ ವ್ಯಾಪಕ ಮತ್ತು ಉತ್ಪಾದಕ ಅಭಿಪ್ರಾಯಗಳನ್ನು ಹಂಚಿಕೊಳ್ಳಲಾಗಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಉಭಯ ದೇಶಗಳ ನಡುವಿನ ಜನರ ಸಂಬಂಧಗಳನ್ನು ಬೆಳೆಸಲು ಭಾರತವು ಫುಕುವೊಕಾದಲ್ಲಿ ರಾಯಭಾರ ಕಚೇರಿಯನ್ನು ತೆರೆಯಲಿದೆ. ಭಯೋತ್ಪಾದನೆ ವಿರುದ್ಧ ಹೋರಾಟದಲ್ಲಿ ಭಾರತ ಮತ್ತು ಜಪಾನ್ ದೃಢಸಂಕಲ್ಪ ಹೊಂದಿವೆ ಎಂದು ಅವರು ಹೇಳಿದರು.

<><*<><>*><>

ಲ್ಯಾಟರಲ್ ಪ್ರವೇಶಕ್ಕೆ ಸಂಬಂಧಿಸಿದ ಜಾಹೀರಾತನ್ನು ರದ್ದುಗೊಳಿಸುವಂತೆ ಸರ್ಕಾರವು ಕೇಂದ್ರ ಲೋಕಸೇವಾ ಆಯೋಗವನ್ನು ಕೇಳಿದೆ. ಇತ್ತೀಚೆಗಷ್ಟೇ ಕೇಂದ್ರ ಸಚಿವಾಲಯಗಳಲ್ಲಿ ೪೫ ಜಂಟಿ ಕಾರ್ಯದರ್ಶಿಗಳು, ನಿರ್ದೇಶಕರು ಮತ್ತು ಉಪ ಕಾರ್ಯದರ್ಶಿಗಳನ್ನು ನೇಮಿಸಲು ಯುಪಿಎಸ್‌ಸಿ ಜಾಹೀರಾತು ನೀಡಿತ್ತು. ಇದನ್ನು ವಿರೋಧ ಪಕ್ಷಗಳು ಪ್ರಶ್ನಿಸಿವೆ. ಕೇಂದ್ರ ಸಿಬ್ಬಂದಿ ಮತ್ತು ತರಬೇತಿ ಇಲಾಖೆಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ಯುಪಿಎಸ್‌ಸಿ ಅಧ್ಯಕ್ಷೆ ಪ್ರೀತಿ ಸುದನ್ ಅವರಿಗೆ ಪತ್ರ ಬರೆದಿದ್ದು, ಲ್ಯಾಟರಲ್ ಪ್ರವೇಶ ಪ್ರಕ್ರಿಯೆಯು ಸಂವಿಧಾನದಲ್ಲಿ ಪ್ರತಿಪಾದಿಸಲಾದ ಸಾಮಾಜಿಕ ನ್ಯಾಯ ಒಳಗೊಂಡಿರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ದೃಢವಾದ ನಂಬಿಕೆ ಹೊಂದಿದ್ದಾರೆ ಎಂದು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ವಿಶೇಷವಾಗಿ ಮೀಸಲಾತಿಯ ನಿಬಂಧನೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕ ಉದ್ಯೋಗದಲ್ಲಿ ಮೀಸಲಾತಿಯು ಸರ್ಕಾರದ ಸಾಮಾಜಿಕ ನ್ಯಾಯ ಚೌಕಟ್ಟಿನ ಮೂಲಾಧಾರವಾಗಿದೆ. ಅನ್ಯಾಯ ಸರಿಪಡಿಸುವ ಮತ್ತು ಒಳಗೊಳ್ಳುವಿಕೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ ಎಂದು ಸಚಿವರು ತಿಳಿಸಿದ್ದಾರೆ. ೨೦೦೫ರಲ್ಲಿ ವೀರಪ್ಪ ಮೊಯಿಲಿ ನೇತೃತ್ವದ ಎರಡನೇ ಆಡಳಿತ ಸುಧಾರಣಾ ಆಯೋಗವು ಲ್ಯಾಟರಲ್ ಎಂಟ್ರಿಯನ್ನು ಅನುಮೋದಿಸಿದೆ. ೨೦೧೩ರಲ್ಲಿ ಆರನೇ ವೇತನ ಆಯೋಗದ ಶಿಫಾರಸುಗಳು ಕೂಡ ಇದೇ ದಾಟಿಯಲ್ಲಿವೆ. ಹಿಂದಿನ ಸರ್ಕಾರಗಳ ಅವಧಿಯಲ್ಲಿ, ವಿವಿಧ ಸಚಿವಾಲಯಗಳಲ್ಲಿ ಕಾರ್ಯದರ್ಶಿ ಮತ್ತು ಯುಐಡಿಎಐ ನ ನಾಯಕತ್ವದಂತಹ ಪ್ರಮುಖ ಹುದ್ದೆಗಳನ್ನು ಯಾವುದೇ ಮೀಸಲಾತಿ ಪ್ರಕ್ರಿಯೆಯನ್ನು ಅನುಸರಿಸದೆ ಲ್ಯಾಟರಲ್ ಮೂಲಕ ಪ್ರವೇಶ ನೀಡಲಾಯಿತು ಎಂದು ಸಚಿವರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಮೀಸಲಾತಿಯ ತತ್ವಗಳೊಂದಿಗೆ ಲ್ಯಾಟರಲ್ ಪ್ರವೇಶ ಪ್ರಕ್ರಿಯೆಯ ನಿರ್ಧಾರವು ಸಾಮಾಜಿಕ ನ್ಯಾಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರ ಬದ್ಧತೆಯನ್ನು ತೋರುತ್ತದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪ್ರಧಾನಮಂತ್ರಿ ಯಾವಾಗಲೂ ಸಾಮಾಜಿಕ ನ್ಯಾಯದಲ್ಲಿ ನಂಬಿಕೆ

ಇಟ್ಟಿದ್ದಾರೆ ಮತ್ತು ಅವರ ಯೋಜನೆಗಳು ಸಮಾಜದ ದುರ್ಬಲ ವರ್ಗಗಳ ಕಲ್ಯಾಣವನ್ನು ಮುನ್ನಡೆಸುತ್ತಿದೆ ಎಂದು ಹೇಳಿದ್ದಾರೆ. ೨೦೦೫ರಲ್ಲಿ ಎರಡನೇ ಆಡಳಿತ ಸುಧಾರಣಾ ಆಯೋಗವು ಲ್ಯಾಟರಲ್ ಪ್ರವೇಶಕ್ಕೆ ಅನುಮೋದಿಸಿರುವುದನ್ನು ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ ಒಪ್ಪಿಕೊಂಡಿದ್ದಾರೆ. ಐಎಎನ್‌ಎಸ್ ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಪರಿಣಿತರನ್ನು ಉನ್ನತ ಸರ್ಕಾರಿ ಹುದ್ದೆಗಳಿಗೆ ನೇಮಕ ಮಾಡಲು ಸರಿಯಾದ ಚೌಕಟ್ಟು ರೂಪಿಸುವುದು ಇದರ ಉದ್ದೇಶವಾಗಿತ್ತು ಎಂದು ಹೇಳಿದರು. ಡಾ. ಮನಮೋಹನ್ ಸಿಂಗ್, ಮಾಂಟೆಕ್ ಸಿಂಗ್ ಅಹ್ಲುವಾಲಿಯಾ ಮುಂತಾದ ವ್ಯಕ್ತಿಗಳು ಲ್ಯಾಟರಲ್ ವ್ಯವಸ್ಥೆ ಮೂಲಕ ಬಂದವರು ಎಂದು ವೀರಪ್ಪ ಮೊಯಿಲಿ ಹೇಳಿದ್ದಾರೆ.

**<><*<><>*><>**

ಆಸ್ಪತ್ರೆಗಳಲ್ಲಿ ಭದ್ರತೆಯನ್ನು ಹೆಚ್ಚಿಸಲು ಸರ್ಕಾರಿ ಆಸ್ಪತ್ರೆಗಳು ಮತ್ತು ಸಂಸ್ಥೆಗಳ ಎಲ್ಲಾ ಮುಖ್ಯಸ್ಥರಿಗೆ ಕೇಂದ್ರ ಆರೋಗ್ಯ ಸಚಿವಾಲಯವು ಪತ್ರ ಬರೆದಿದೆ. ಪ್ರವೇಶ ದ್ವಾರಗಳು, ನಿರ್ಗಮನಗಳು, ಕಾರಿಡಾರ್‌ಗಳು, ಡಾರ್ಕ್ ಸ್ಪಾಟ್‌ಗಳು ಮತ್ತು ಸೂಕ್ಷ್ಮ ಪ್ರದೇಶಗಳು ಸೇರಿದಂತೆ ಆಯಕಟ್ಟಿನ ಸ್ಥಳಗಳಲ್ಲಿ ಸಾಕಷ್ಟು ಸಂಖ್ಯೆಯ ಹೈ-ರೆಸಲ್ಯೂಶನ್ ಸಿಸಿಟಿವಿ ಕ್ಯಾಮೆರಾಗಳನ್ನು ಸ್ಥಾಪಿಸುವಂತೆ ಸಚಿವಾಲಯ ಸೂಚನೆ ನೀಡಿದೆ. ತುರ್ತು ಪರಿಸ್ಥಿತಿಗಳಿಗೆ ತ್ವರಿತ ಪ್ರತಿಕ್ರಿಯೆಗಾಗಿ ನಿಯಂತ್ರಣ ಕೊಠಡಿಯನ್ನು ಸಹ ಸ್ಥಾಪಿಸಬೇಕು. ಆಸ್ಪತ್ರೆ ಆವರಣದಲ್ಲಿ ಸರಿಯಾದ ನಿಗಾ, ಗಸ್ತು ಮತ್ತು ಕಣ್ಗಾವಲುಗಾಗಿ ಸಾಕಷ್ಟು ಸಂಖ್ಯೆಯ ಸುಶಿಕ್ಷಿತ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಬೇಕು. ಅಧಿಕೃತ ಸಿಬ್ಬಂದಿಗೆ ಮಾತ್ರ ಪ್ರವೇಶವನ್ನು ಅನುಮತಿಸಲು ಪ್ರವೇಶ ಮತ್ತು ನಿರ್ಗಮನವನ್ನು ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡಬೇಕು ಮತ್ತು ಕರ್ತವ್ಯದಲ್ಲಿರುವಾಗ ಎಲ್ಲಾ ಆಸ್ಪತ್ರೆಯ ಸಿಬ್ಬಂದಿ ಐಡಿ ಕಾರ್ಡ್‌ಗಳನ್ನು ಪ್ರದರ್ಶಿಸುವುದನ್ನು ಕಡ್ಡಾಯಗೊಳಿಸಬೇಕು ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ಎಲ್ಲಾ ಸಂದರ್ಶಕರ ಮೇಲ್ವಿಚಾರಣೆಯನ್ನು ಖಚಿತಪಡಿಸಿಕೊಳ್ಳಲು ಸೂಕ್ತ ವ್ಯವಸ್ಥೆಗಳನ್ನು ಮಾಡಬೇಕು. ಆಸ್ಪತ್ರೆ ಆವರಣದಲ್ಲಿ ಆರೋಗ್ಯ ಕಾರ್ಯಕರ್ತರ ವಿರುದ್ಧ ಹಿಂಸಾಚಾರವನ್ನು ತಡೆಗಟ್ಟಲು ಕ್ರಮ ಕೈಗೊಳ್ಳಬೇಕು. ವೈದ್ಯರು, ದಾದಿಯರು ಮತ್ತು ಆಡಳಿತ ಸಿಬ್ಬಂದಿ ಸೇರಿದಂತೆ ಎಲ್ಲಾ ಆಸ್ಪತ್ರೆ ಸಿಬ್ಬಂದಿಗೆ ಭದ್ರತಾ ಬೆದರಿಕೆಗಳನ್ನು ಗುರುತಿಸಲು ಮತ್ತು ಪ್ರತಿಕ್ರಿಯಿಸಲು ತರಬೇತಿ ನೀಡಬೇಕು ಎಂಬುದು ಸೇರಿದಂತೆ ಹಲವು ಮಾರ್ಗಸೂಚಿಗಳನ್ನು ನೀಡಲಾಗಿದೆ.

**<><*<><>*><>**

ವಿದ್ಯುತ್ ಕ್ಷೇತ್ರದ ದಕ್ಷತೆ, ಪಾರದರ್ಶಕತೆ ಮತ್ತು ಪರಿಣಾಮಕಾರಿತ್ವವನ್ನು ಹೆಚ್ಚಿಸಲು ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಖಟ್ಟರ್ ಅವರು ನಿನ್ನೆ ನವದೆಹಲಿಯಲ್ಲಿ ಮೂರು ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳಿಗೆ ಚಾಲನೆ ನೀಡಿದರು. ಪೋರ್ಟಲ್‌ಗಳನ್ನು ಯೋಜನೆಗಳ ಆನ್‌ಲೈನ್ ಮಾನಿಟರಿಂಗ್‌ಗಾಗಿ ಥರ್ಮಲ್ -ಪ್ರಾಂಪ್ಟ್, ವಿದ್ಯುತ್ ವಲಯಕ್ಕೆ ವಿಪತ್ತು ನಿರೋಧಕ ಮೂಲಸೌಕರ್ಯ - ಡಿಆರ್‌ಐಪಿಎಸ್ ಮತ್ತು ಜಲ್ ವಿದ್ಯುತ್ ಡಿಪಿಆರ್ ಎಂದು ಪೋರ್ಟಲ್‌ಗಳನ್ನು ಹೆಸರಿಸಲಾಗಿದೆ. ಈ ಮೂರು ಆನ್‌ಲೈನ್ ಪೋರ್ಟಲ್‌ಗಳನ್ನು ಪ್ರಾರಂಭಿಸುವುದರಿಂದ ದೇಶದಲ್ಲಿ ವಿದ್ಯುತ್ ಕ್ಷೇತ್ರದ ಪಾರದರ್ಶಕ, ಸಮನ್ವಯ ಮತ್ತು ಪರಿಣಾಮಕಾರಿ ಕೆಲಸ ಮಾಡಲು ಸಾಧ್ಯವಾಗುತ್ತದೆ ಎಂದು ಸಚಿವರು ಒತ್ತಿ ಹೇಳಿದರು. ೨೦೪೭ ರ ವೇಳೆಗೆ ವಿಕಸಿತ ಭಾರತ ಗುರಿಯನ್ನು ಸಾಧಿಸುವ ಪ್ರಮುಖ ಅಂಶವಾಗಿ ವಿದ್ಯುತ್ ಕ್ಷೇತ್ರದ ಪ್ರಾಮುಖ್ಯತೆಯನ್ನು ವಿವರಿಸಿದರು. ದೇಶದಲ್ಲಿ ನಡೆಯುತ್ತಿರುವ ಆರ್ಥಿಕ ಚಟುವಟಿಕೆಗಳಿಗೆ ವಿದ್ಯುತ್ ಪ್ರಮುಖವಾಗಿದೆ. ವಿದ್ಯುತ್ ಬೇಡಿಕೆಯೂ ಹೆಚ್ಚುತ್ತಿದ್ದು,

ಚಾಲ್ತಿಯಲ್ಲಿರುವ ಯೋಜನೆಗಳು ಮತ್ತು ಥರ್ಮಲ್ ಯೋಜನೆಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸುವುದು ಅತ್ಯಗತ್ಯ ಎಂದು ಸಚಿವರು ಹೇಳಿದರು.

**<><*<><>*><>**

ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ, ಪದವಿಪೂರ್ವ ಹಂತದ ಕಾಲೇಜು ವಿದ್ಯಾರ್ಥಿಗಳಿಗೆ ಆರ್‌ಬಿಐ-೯೦ ರಸಪ್ರಶ್ನೆಯನ್ನು ಪ್ರಾರಂಭಿಸಿದೆ. ಆರ್‌ಬಿಐನ ೯೦ ವರ್ಷಗಳ ಕಾರ್ಯನಿರ್ವಹಣೆಯ ಸ್ಮರಣಾರ್ಥ ಈ ಕಾರ್ಯಕ್ರಮವನ್ನು ರಾಷ್ಟ್ರವ್ಯಾಪಿ ಆಯೋಜಿಸಿದೆ. ಆರ್‌ಬಿಐ-೯೦ ರಸಪ್ರಶ್ನೆ ಕಾರ್ಯಕ್ರಮ ಸಾಮಾನ್ಯ ಜ್ಞಾನ ಆಧಾರಿತವಾಗಿದ್ದು ಬಹು-ಹಂತದ ಸ್ಪರ್ಧೆಯನ್ನು ಒಳಗೊಂಡಿರುತ್ತದೆ. ಆನ್‌ಲೈನ್ ಮೂಲಕ ಮೊದಲ ಹಂತ ಪ್ರಾರಂಭವಾಗಲಿದ್ದು, ನಂತರ ರಾಜ್ಯ ಮತ್ತು ವಲಯ ಮಟ್ಟದ ಸುತ್ತುಗಳು ಮತ್ತು ರಾಷ್ಟ್ರೀಯದ ಫೈನಲ್‌ನಲ್ಲಿ ಕೊನೆಗೊಳ್ಳಲಿದೆ. ವಿವಿಧ ಹಂತಗಳಲ್ಲಿ ಆಕರ್ಷಕ ಬಹುಮಾನಗಳನ್ನು ವಿತರಿಸಲಾಗುವುದು ಎಂದು ಆರ್‌ಬಿಐ ತಿಳಿಸಿದೆ. ನಿನ್ನೆ ಆರ್‌ಬಿಐ-೯೦ ರಸಪ್ರಶ್ನೆ ಕಾರ್ಯಕ್ರಮವನ್ನು ಆನ್‌ಲೈನ್ ಮೂಲಕ ಪ್ರಾರಂಭಿಸಿದ ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್, ಈ ಸ್ಪರ್ಧೆಯು ವಿದ್ಯಾರ್ಥಿಗಳಲ್ಲಿ ರಿಸರ್ವ್ ಬ್ಯಾಂಕ್ ಮತ್ತು ಆರ್ಥಿಕ ಪರಿಸರ ವ್ಯವಸ್ಥೆಯ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಸಹಾಯಕವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಆರ್‌ಬಿಐ ತನ್ನ ಸಾರ್ವಜನಿಕ ಜಾಗೃತಿ ಅಭಿಯಾನಗಳ ಮೂಲಕ ಜವಾಬ್ದಾರಿಯುತ ಆರ್ಥಿಕ ನಡವಳಿಕೆಯನ್ನು ಬೆಳೆಸಲು ಮತ್ತು ಡಿಜಿಟಲ್ ಹಣಕಾಸು ಉತ್ಪನ್ನಗಳ ಸುರಕ್ಷಿತ ಮತ್ತು ಸುರಕ್ಷಿತ ಬಳಕೆಯ ಅಭ್ಯಾಸವನ್ನು ಅಭಿವೃದ್ಧಿಪಡಿಸಲು ಯುವಜನರನ್ನು ಪ್ರೋತ್ಸಾಹಿಸಲಿದೆ ಎಂದು ಅವರು ಹೇಳಿದ್ದಾರೆ.

**<><*<><>*><>**

ಜೋರ್ಡಾನ್‌ನ ಅಮನ್‌ನಲ್ಲಿ ನಡೆಯುತ್ತಿರುವ ೧೭ ವರ್ಷದೊಳಗಿನ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ರೋನಕ್ ದಹಿಯಾ ಅವರು, ಗ್ರೀಕೋ-ರೋಮನ್ ೧೧೦ ಕೆಜಿ ವಿಭಾಗದಲ್ಲಿ ಕಂಚು ಗೆದ್ದರು. ಪ್ರಸ್ತುತ ವಿಶ್ವದ ೨ನೇ ಶ್ರೇಯಾಂಕದ ರೋನಕ್ ಅವರು, ಕಂಚಿನ ಪದಕಕ್ಕಾಗಿ ನಡೆದ ಪಂದ್ಯದಲ್ಲಿ ಟರ್ಕಿಯ ಎಮುರುಲ್ಲಾ ಕ್ಯಾಪ್ಕನ್ ಅವರನ್ನು ೬-೧ ಅಂತರದಿಂದ ಸೋಲಿಸಿದರು. ಇದಕ್ಕೂ ಮುನ್ನ ರೋನಕ್ ಸೆಮಿಫೈನಲ್ ಪಂದ್ಯದಲ್ಲಿ ಹಂಗೇರಿಯ ಎದುರಾಳಿ ಝೋಲ್ಟಾನ್ ಝಾಕೊ ವಿರುದ್ಧ ೦-೨ ಅಂತರದಿಂದ ಪರಾಭವಗೊಂಡಿದ್ದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**